## ಕರ್ನಾಟಕ ಸರ್ಕಾರದ ನಡವಳಿಗಳು

| | |
|---|---|
| **ವಿಷಯ:-** | 2021-22ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಆಯವ್ಯಯದಲ್ಲಿ ನೀಡಿರುವ ಅನುದಾನದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಕುರಿತು. |
| **ಓದಲಾಗಿದೆ:-** | 1. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ/2021, ದಿನಾಂಕ: 05.04 .2021.<br>2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪತ್ರ ಸಂಖ್ಯೆ: ಹಿಂವಕನಿ/ಲೆಶಾ-2/ಸಿಆರ್-1/2021-22, ದಿನಾಂಕ:20 .04.2021. |

**ಪ್ರಸ್ತಾವನೆ:-**

ಮೇಲೆ ಓದಲಾದ ಮೇಲೆ ಕ್ರಮ ಸಂಖ್ಯೆ (1)ರ ಆರ್ಥಿಕ ಇಲಾಖೆಯ ಆದೇಶದಲ್ಲಿ 2021-22ನೇ ಸಾಲಿನಲ್ಲಿ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಕಾರ್ಯದರ್ಶಿ ಹಾಗೂ ಪ್ರಧಾನ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ. ಹಾಗೂ ಲೆಕ್ಕ ಶೀರ್ಷಿಕೆ 2225-03-277-2-62 ಕ್ಕೆ ಸಂಬಂಧಪಟ್ಟಂತೆ ಯೋಜನೆಗಳಿಗೆ ಹಣ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯ ಅನುಮೋದನೆ ಪಡೆಯುವುದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ಪತ್ರದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು 2021-22ನೇ ಸಾಲಿನ ಆಯವ್ಯಯದಲ್ಲಿ ಇಲಾಖೆಯ ವಿವಿಧ ಯೋಜನೆಯಡಿ ಒದಗಿಸಿರುವ ಅನುದಾನದಲ್ಲಿ, ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 339 ಬಿಎಂಎಸ್ 2021,**
**ಬೆಂಗಳೂರು, ದಿನಾಂಕ: 27- 05-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಹಿಂದುಳಿದ ವರ್ಗದವರಿಗೆ ಹೊಸ ಮೊರಾರ್ಜಿ ದೇಸಾಯಿ ನಿವಾಸಿ ಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ ಕಾರ್ಯಕ್ರಮಗಳಿಗಾಗಿ 2021-22ನೇ ಸಾಲಿಗೆ ಮಂಜೂರಾಗಿರುವ ಆಯವ್ಯಯದಲ್ಲಿ ಮೊದಲನೇ ತ್ರೈಮಾಸಿಕ ಕಂತಾಗಿ ಶೇ.25 ರಷ್ಟು ಅನುದಾನವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

| ಕ್ರ. ಸಂ | ಕಾರ್ಯಕ್ರಮ/ ಲೆಕ್ಕಶೀರ್ಷಿಕೆ | 2021-22ನೇ ಸಾಲಿಗೆ ಒದಗಿಸಿರುವ ಆಯವ್ಯಯ | ಮೊದಲನೇ ತ್ರೈಮಾಸಿಕದಲ್ಲಿ ಬಿಡುಗಡೆ ಮಾಡಿರುವ ಮೊತ್ತ |
|---|---|---|---|
| 16 | ಹಿಂದುಳಿದ ವರ್ಗದವರಿಗೆ ಹೊಸ ಮೊರಾರ್ಜಿ ದೇಸಾಯಿ ನಿವಾಸಿ ಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ 2225-03-277-2-62-(059) | 15351.00 | 3837.75 |
| | ಪರಿಶಿಷ್ಟ ಜಾತಿ ಉಪಯೋಜನೆ - (422) | 2632.00 | 658.00 |
| | ಗಿರಿಜನ ಉಪಯೋಜನೆ - (423) | 1317.00 | 329.25 |
| | **ಒಟ್ಟು** | **19300.00** | **4825.00** |

**ಷರತ್ತುಗಳು:-**

1. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಸಲ್ಲಿಸುವ ಲೆಕ್ಕ ಶೀರ್ಷಿಕೆ ಕಾರ್ಯಕ್ರಮಗಳಿಗೆ ಬಿಡುಗಡೆ ಮಾಡಿದ ಅನುದಾನಕ್ಕೆ ಸಂಬಂಧಿಸಿದಂತೆ ಸಲ್ಲಿಸುವ ಲೆಕ್ಕಶೀರ್ಷಿಕೆವಾರು ಸ್ವೀಕೃತನ ರಸೀದಿ ಬಿಲ್ಲುಗಳಿಗೆ ಆಯುಕ್ತರು, ಹಿಂ.ವ.ಕ ಇವರ ಮೇಲು ರುಜು ಪಡೆದು ಹಣ ಡ್ರಾ ಮಾಡತಕ್ಕದ್ದು.
2. 2021-22ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಅನುದಾನದ ಹಣ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಯೋಜನೆಯ ಉಸ್ತುವಾರಿಗಾಗಿ ಖರ್ಚು ಮಾಡಿದ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಅನುದಾನದ ಕೋರಿಕೆ ಪ್ರಸ್ತಾವನೆಯೊಂದಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 238 ವೆಚ್ಚ-3/2021, ದಿನಾಂಕ:26.05.2021 ರ ಸಹಮತಿಯೊಂದಿಗೆ ಹಾಗೂ ಟಿಪ್ಪಣಿ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ:05.04.2021 ರಲ್ಲಿ ಇಲಾಖಾ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

V. Akkamahadevi 27/5/21

**(ವಿ.ಅಕ್ಕಮಹಾದೇವಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು,(ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ3&9), ವಿಧಾನಸೌಧ.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
5. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮಾನ್ಯೇಜ್‌ಮೆಂಟ್ ಕೇಂದ್ರ 2ನೇ ಮಹಡಿ, ಸೌತ್ ಬ್ಲಾಕ್ ಖನಿಜ ಭವನ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ.
2. ಸರ್ಕಾರದ ಅಪರ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.